**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ, ಶಿವಮೊಗ್ಗಕ್ಕೆ 2014–15ನೇ ಸಾಲಿನ ಪ್ರಥಮ ಕಂತಿನ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ: 1. ಸರ್ಕಾರಿ ಆದೇಶ ಸಂಖ್ಯೆ:ಯೋಇ 64 ಎಸ್‌ಎಸ್‌ಎಂ 2014. ದಿನಾಂಕ:01.04.2014

2. ಕಾರ್ಯದರ್ಶಿ, ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ, ಇವರ ಪತ್ರ ಸಂಖ್ಯೆ:ಮಪ್ರಮಂ/ನಗದು:ಹ.ಬಿ/2014–15, ದಿನಾಂಕ:19.05.2014.

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮಸಂಖ್ಯೆ(1)ರ ಸರ್ಕಾರಿ ಆದೇಶದಲ್ಲಿ ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ ಯೋಜನೆಯನ್ನು 2014–15ನೇ ಸಾಲಿನಲ್ಲಿ ಮುಂದುವರಿಸಲಾಗಿದೆ. 2014–15ನೇ ಸಾಲಿನ ಆಯವ್ಯಯದಲ್ಲಿ ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿಗೆ ಒಟ್ಟು ರೂ.3800.00 ಲಕ್ಷಗಳನ್ನು ಈ ಕೆಳಕಂಡಂತೆ ಒದಗಿಸಲಾಗಿದೆ:

| ಕ್ರಮ ಸಂಖ್ಯೆ | ಲೆಕ್ಕಶೀರ್ಷಿಕೆ | ಮೊತ್ತ (ರೂ. ಲಕ್ಷಗಳಲ್ಲಿ) |
|---|---|---|
| 1 | 2515–00–103–0–02–101 (ಸಹಾಯಾನುದಾನ) | 115.00 |
| 2 | 2515–00–103–0–02–132 (ಬಂಡವಾಳ ವೆಚ್ಚ) | 2886.24 |
| 3 | 2515–00–103–0–02–422 (ವಿಶೇಷ ಘಟಕ ಯೋಜನೆ) | 549.10 |
| 4 | 2515–00–103–0–02–423 (ಗಿರಿಜನ ಉಪಯೋಜನೆ) | 249.66 |
| | ಒಟ್ಟು | **3800.00** |

ಮೇಲೆ ಓದಲಾದ ಕ್ರಮಸಂಖ್ಯೆ(2)ರ ಪತ್ರದಲ್ಲಿ ಕಾರ್ಯದರ್ಶಿ, ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ, ಶಿವಮೊಗ್ಗ, ಇವರು 2014–15ನೇ ಸಾಲಿನ ಪ್ರಥಮ ಕಂತಿನ ಅನುದಾನವನ್ನು ಬಿಡುಗಡೆ ಮಾಡುವಂತೆ ಕೋರಿರುತ್ತಾರೆ. ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ:ಯೋಇ 19 ಮಪ್ರಮಂ 2014, ಬೆಂಗಳೂರು, ದಿನಾಂಕ:10.06.2014**

ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ, ಶಿವಮೊಗ್ಗಕ್ಕೆ 2014–15ನೇ ಸಾಲಿನ ಪ್ರಥಮ ಕಂತಿನ ಅನುದಾನವಾಗಿ ರೂ.950.00 ಲಕ್ಷ (ಒಂಭತ್ತು ಕೋಟಿ ಐವತ್ತು ಲಕ್ಷ ರೂಪಾಯಿಗಳು ಮಾತ್ರ) ಗಳನ್ನು ಈ ಕೆಳಕಂಡ ಲೆಕ್ಕಶೀರ್ಷಿಕೆಗಳಡಿ ಬಿಡುಗಡೆ ಮಾಡಿದೆ.

| ಕ್ರಮ ಸಂಖ್ಯೆ | ಲೆಕ್ಕಶೀರ್ಷಿಕೆ | ಮೊತ್ತ (ರೂ. ಲಕ್ಷಗಳಲ್ಲಿ) |
|---|---|---|
| 1 | 2515–00–103–0–02–101 (ಸಹಾಯಾನುದಾನ) | 28.750 |
| 2 | 2515–00–103–0–02–132 (ಬಂಡವಾಳ ವೆಚ್ಚ) | 721.560 |
| 3 | 2515–00–103–0–02–422 (ವಿಶೇಷ ಘಟಕ ಯೋಜನೆ) | 137.275 |
| 4 | 2515–00–103–0–02–423 (ಗಿರಿಜನ ಉಪಯೋಜನೆ) | 62.415 |
| | ಒಟ್ಟು | **950.000** |

ಬಿಡುಗಡೆಯಾದ ಈ ಅನುದಾನವನ್ನು ಮಂಡಳಿಯ ಕಾರ್ಯದರ್ಶಿಯವರ ವೈಯಕ್ತಿಕ ಖಾತೆಗೆ ಜಮ ಮಾಡಿ, ನಂತರ ಅವಶ್ಯಕತೆಗನುಗುಣವಾಗಿ ಖರ್ಚು ಮಾಡತಕ್ಕದು ಮತ್ತು ನಿಯಮಾನುಸಾರ ಪಣ ಬಳಕೆ ಪ್ರಮಾಣಪತ್ರವನ್ನು ಸರ್ಕಾರಕ್ಕೆ ಸಲ್ಲಿಸುವುದು.

ಪಿಡಿ ಖಾತೆಯಲ್ಲಿ ಲಭ್ಯವಿರುವ ಅನುದಾನ ಮತ್ತು ಈ ಆದೇಶದಲ್ಲಿ ಬಿಡುಗಡೆ ಮಾಡಿರುವ ಅನುದಾನದ ಶೇಕಡ 75 ರಷ್ಟನ್ನು ವೆಚ್ಚ ಭರಿಸಿದ ನಂತರ 2ನೇ ಕಂತಿನ ಅನುದಾನ ಬಿಡುಗಡೆಗೆ ಪ್ರಸ್ತಾವನೆ ಸಲ್ಲಿಸತಕ್ಕದ್ದು.

ಈ ಆದೇಶವನ್ನು ಸರ್ಕಾರಿ ಆದೇಶ ಸಂಖ್ಯೆ:ಆಇ 03 ಟಿಎಫ್‌ಪಿ 2014, ದಿನಾಂಕ:04.04.2014 ರಲ್ಲಿ ಆಡಳಿತ ಇಲಾಖೆಯ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ವಿತ್ತಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಹೆಚ್.ರಾಮಚಂದ್ರಪ್ಪ) 10/6/14
ಸರ್ಕಾರದ ಅಧೀನ ಕಾರ್ಯದರ್ಶಿ 1&2(ಪ್ರಭಾರ),
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ.
4. ಸರ್ಕಾರದ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ.
5. ಕಾರ್ಯದರ್ಶಿ, ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ, ಶಿವಮೊಗ್ಗ.
6. ನಿರ್ದೇಶಕರು, ಎಡಿಬಿ ವಿಭಾಗ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ.
7. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
8. ಜಿಲ್ಲಾ ಖಜಾನಾಧಿಕಾರಿಗಳು, ಶಿವಮೊಗ್ಗ ಜಿಲ್ಲೆ, ಶಿವಮೊಗ್ಗ.
9. ವಾರದ ರಾಜ್ಯ ಪತ್ರ.
10. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

***